8 37

28/11

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಿವಕುಮಾರ್ ಕೆ ರವರ ನಿಯಮ 330 ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರ

### ಸೂಚನೆ

ರಾಜ್ಯದಲ್ಲಿ ನೆಲೆಸಿರುವ ಆದಿವಾಸಿ ಕುಟುಂಬಗಳಾದ ಜೇನುಕುರುಬ, ಬೆಟ್ಟಕುರುಬ, ಕೊರಗ, ಸೋಲಿಗ, ಮಲೆಕುಡಿಯ, ಯರವ, ಹಕ್ಕಿಪಿಕ್ಕಿ ಮತ್ತು ಸಿದ್ದಿ ಮುಂತಾದವರು ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಮತ್ತು ರಾಜಕೀಯವಾಗಿ ಹಿಂದುಳಿದಿದ್ದು, ಅನಕ್ಷರತೆ ಮತ್ತು ಅಪೌಷ್ಠಿಕತೆಯ ಜೊತೆಗೆ ಸ್ಥಿರ ಉದ್ಯೋಗ ಮತ್ತು ಆದಾಯವಿಲ್ಲದೆ ಬಳಲುತ್ತಿರುವ ಇವರುಗಳಿಗೆ ಪುನರ್‌ವಸತಿ ಕಲ್ಪಿಸುವ ದೃಷ್ಟಿಯಿಂದ ಪ್ರೊ.ಮುಜಾಫರ್ ಅಸ್ಸಾದಿ ವರದಿಯಲ್ಲಿರುವ ಅಂಶಗಳನ್ನು ಜಾರಿಗೊಳಿಸುವುದಲ್ಲದೆ, ಪರಿಶಿಷ್ಟ ಪಂಗಡ ಸಮುದಾಯದಲ್ಲಿ ಆದಿವಾಸಿ ಕುಟುಂಬಗಳಿಗೂ ಒಳಮೀಸಲಾತಿ ಜಾರಿಗೊಳಿಸಬೇಕೆನ್ನುವ ವಿಷಯದ ಬಗ್ಗೆ ನಿಯಮ 330 ರಲ್ಲಿ ಮಾನ್ಯ ಮುಖ್ಯಮಂತ್ರಿಗಳಲ್ಲಿ ಪ್ರಸ್ತಾಪಿಸಬಯಸುತ್ತೇನೆ.

### ಉತ್ತರ

- ರಾಜ್ಯದಲ್ಲಿ ನೆಲೆಸಿರುವ ಪರಿಶಿಷ್ಟ ಪಂಗಡಗಳಾದ ಜೇನುಕುರುಬ, ಬೆಟ್ಟಕುರುಬ, ಕೊರಗ, ಸೋಲಿಗ, ಮಲೆಕುಡಿಯ, ಯರವ, ಹಕ್ಕಿಪಿಕ್ಕಿ ಮತ್ತು ಸಿದ್ದಿ ಸಮುದಾಯದವರಿಗೆ ಶೈಕ್ಷಣಿಕ, ಸಾಮಾಜಿಕ ಮತ್ತು ಆರ್ಥಿಕ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.
- ಶೈಕ್ಷಣಿಕ ಅಭಿವೃದ್ಧಿಗಾಗಿ ವಿದ್ಯಾರ್ಥಿವೇತನ, ಪ್ರೋತ್ಸಾಹಧನ, ವಿದ್ಯಾರ್ಥಿನಿಲಯ ಹಾಗೂ ವಸತಿ ಶಾಲೆಗಳಲ್ಲಿ ಪ್ರವೇಶಾವಕಾಶ ಕಲ್ಪಿಸಿ ಉಚಿತ ಶಿಕ್ಷಣ ನೀಡಲಾಗುತ್ತಿದೆ. ವಿಶೇಷವಾಗಿ ಕೊರಗ ಮತ್ತು ಜೇನುಕುರುಬ ಸಮುದಾಯದ ವಿದ್ಯಾವಂತ ಯುವಕ/ಯುವತಿಯರಿಗೆ ಶೈಕ್ಷಣಿಕ ಪ್ರೋತ್ಸಾಹಧನ ಮತ್ತು ನಿರುದ್ಯೋಗಿ ಜೀವನ ಭತ್ಯೆ ನೀಡಲಾಗುತ್ತಿದೆ.
- ಅಪೌಷ್ಠಿಕತೆಯನ್ನು ನಿವಾರಿಸಲು 12 ಸಮುದಾಯದವರಿಗೆ ಪೌಷ್ಠಿಕ ಆಹಾರ ಪದಾರ್ಥಗಳನ್ನು 12 ತಿಂಗಳುಗಳವರೆಗೆ ವಿತರಿಸಲಾಗುತ್ತಿದೆ. ಆರೋಗ್ಯ ಸೇವೆಗಾಗಿ Health Navigator ಸೌಲಭ್ಯ, ಮನೆಗಳ ನಿರ್ಮಾಣ, ಕುಡಿಯುವ ನೀರು, ಸಂಪರ್ಕ ರಸ್ತೆ, ವಿದ್ಯುತ್ ಸಂಪರ್ಕ ಹಾಗೂ ವಿಶೇಷವಾಗಿ ಕೊರಗ ಸಮುದಾಯದವರಿಗೆ ವೈದ್ಯಕೀಯ ವೆಚ್ಚ ಮರುಪಾವತಿ ಇತ್ಯಾದಿ ಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ.
- ನಾಗರಹೊಳೆ (ರಾಜೀವ್ ಗಾಂಧಿ) ರಾಷ್ಟ್ರೀಯ ಉದ್ಯಾನವನದಲ್ಲಿನ ಬುಡಕಟ್ಟು ಸಮುದಾಯಗಳ 3418 ಕುಟುಂಬಗಳಿಗೆ ಸ್ಥಳಾಂತರ ಹಾಗೂ ಪುನರ್‌ವಸತಿ ಕಲ್ಪಿಸಲು ಪ್ರೊ.ಮುಜಾಫರ್ ಅಸ್ಸಾದಿ ವರದಿಯಲ್ಲಿ ಶಿಫಾರಸ್ಸು ಮಾಡಿದ್ದು, ಈ ಸಂಬಂಧ ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗರವರ ಅಧ್ಯಕ್ಷತೆಯಲ್ಲಿ ದಿನಾಂಕ:13.04.2022 ರಂದು ನಡೆದ ಜಿಲ್ಲಾಮಟ್ಟದ ಸಮಿತಿ ಸಭೆಯಲ್ಲಿ 3145 ಕುಟುಂಬಗಳಿಗೆ ಪುನರ್‌ವಸತಿ ಕಲ್ಪಿಸಲು ತೀರ್ಮಾನಿಸಿದ್ದು, ಈ ಕುರಿತು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆರವರು ಕ್ರಮವಹಿಸಬೇಕಾಗಿರುತ್ತದೆ.
- ಪರಿಶಿಷ್ಟ ಪಂಗಡದ ಆದಿವಾಸಿ ಕುಟುಂಬಗಳಿಗೆ ಒಳಮೀಸಲಾತಿ ಜಾರಿಗೊಳಿಸುವ ಕುರಿತಂತೆ ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

STW/SECB/SAD/143/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ